ಆ) ಸದರಿ ರಸ್ತೆಯ 8.30 ಕಿಮೀ ಉದ್ದದಲ್ಲಿ 4.60 ಕಿಮೀ ಉದ್ದದ ರಸ್ತೆಯು ಡಾಂಬರಿನ ರಸ್ತೆಯಾಗಿದ್ದು ಉಳಿದ 3.70 ಕಿಮೀ ಉದ್ದದ ರಸ್ತೆಯು ಜಲ ರಸ್ತೆಯಾಗಿರುತ್ತದೆ. ಈ ಭಾಗದಲ್ಲಿ ವಿಧಾನ ಸಭಾ ಕ್ಷೇತ್ರದ ರಸ್ತೆ ಅಭಿವೃದ್ಧಿ ಕಾರ್ಯಕ್ರಮದ ಅಡಿಯಲ್ಲಿ ಪ್ರಥಮರಾಗಿ 5 ಲಕ್ಷ ರೂ.ಗಳ ಅನುದಾನದಲ್ಲಿ 2.50 ಕಿಮೀ ಉದ್ದಕ್ಕೆ ಮರು ಜಲ್ಲಿ ಹಾಕಿ ಡಾಂಬರನ್ನು ಮಾಡುವ ಕಾಮಗಾರಿಯನ್ನು ತೆಗೆದುಕೊಳ್ಳಲಾಗಿದ್ದು ಕೆಲಸವು ಪ್ರಗತಿಯಲ್ಲಿದೆ.

ಇ) ಸದರಿ ಕಾರ್ಯಕ್ರಮದಲ್ಲಿ ಉಳಿದ ಅನುದಾನ ಲಭ್ಯತೆಯನ್ನು ಅನುಸರಿಸಿ ಕಾಮಗಾರಿಯನ್ನು ಪೂರ್ಣಗೊಳಿಸಲು 6 ತಿಂಗಳ ಕಾಲಾವಕಾಶ ಬೇಕಾಗುತ್ತದೆ.

ತೀತಾ ಜಲಾಶಯದ ಕೋಡಿ ನೀರು ಹರಿಯುವುದಕ್ಕೆ ಸೇತುವೆ ಮಂಜೂರು.

674 - ಶ್ರೀ ಸಿ. ವೀರಭದ್ರಯ್ಯ (ಕೊರಟಗೆರೆ) : ಮಾನ್ಯ ಉಪ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಕೊರಟಗೆರೆ ತಾಲ್ಲೂಕು ಕೊರಟಗೆರೆ- ಮೂವತ್ತೂರು ರಸ್ತೆಯಲ್ಲಿ ತೀತಾ ಜಲಾಶಯದ ಕೋಡಿ ನೀರಿಗೆ ಸೇತುವೆ ಕಟ್ಟದೆ ಇರುವುದರಿಂದ ಸಂಚಾರಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಈ ಸೇತುವೆ ಅಥವಾ ಹಾರ್ಡಪಾತ್ ಕಾಮಗಾರಿಯನ್ನು ತೆಗೆದುಕೊಳ್ಳಲು ಸರ್ಕಾರವು ತೆಗೆದುಕೊಂಡಿರುವ ಕ್ರಮವೇನು;

ಇ) ಈ ಕಾಮಗಾರಿಯನ್ನು ತೆಗೆದುಕೊಳ್ಳಲು ಬೇಕಾಗಿರುವ ಕಾಲಾವಕಾಶ ಎಷ್ಟು?

ಶ್ರೀ ಎಸ್.ಎಂ. ಕೃಷ್ಣ (ಉಪಮುಖ್ಯ ಮಂತ್ರಿಗಳು) :

ಅ) ಹೌದು.

ಆ) ಪ್ರಸ್ತಾವನೆಯನ್ನು ಪರಿಶೀಲಿಸಲಾಗುತ್ತಿದೆ.

ಇ) ಪರಿಶೀಲಿಸಿದ ನಂತರ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.

ಕೊರಟಗೆರೆ-ದಾಬಸ್‌ಪೇಟೆ ರಸ್ತೆಯಲ್ಲಿ ರೈಲ್ವೆ ಮೇಲೆ ಬ್ರಿಡ್ಜ್

673 - ಶ್ರೀ ಸಿ.ವೀರಭದ್ರಯ್ಯ (ಕೊರಟಗೆರೆ) : ಮಾನ್ಯ ಲೋಕೋಪಯೋಗಿ ಇಲಾಖೆ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

(ಅ) ಕೊರಟಗೆರೆ ದಾಬಸ್‌ಪೇಟೆ ರಸ್ತೆಯಲ್ಲಿ ರೈಲ್ವೆ ಲೈನ್ ಮೇಲೆ ಹಾದು ಹೋಗುತ್ತಿದ್ದ ಸೇತುವೆಯನ್ನು ತೆಗೆದು ಹಾಕಿದುದರಿಂದ ಜನ, ಜಾನುವಾರು, ಓಡಾಡಲು ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ ಸದರಿ ರೈಲ್ವೆ ಲೈನ್ ಮೇಲೆ ಹೊಸದಾಗಿ ಸೇತುವೆ ನಿರ್ಮಾಣ ಮಾಡಲು ಸರ್ಕಾರದವರು ಕ್ರಮ ಕೈಗೊಳ್ಳಲಾಗುವುದೇ;

(ಇ) ಹಾಗಿದ್ದಲ್ಲಿ ಈ ಸೇತುವೆ ಕೆಲಸ ಪ್ರಾರಂಭಿಸಲು ಬೇಕಾಗಿರುವ ಕಾಲಾವಕಾಶವೆಷ್ಟು?

ಶ್ರೀ ಕೆ.ಹೆಚ್. ರಂಗನಾಥ್ (ಲೋಕೋಪಯೋಗಿ ಸಚಿವರು) :

ಅ) ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) ಈ ವಿಷಯದ ಬಗ್ಗೆ ರೈಲ್ವೆ ಇಲಾಖೆಗೆ ಅಂದಾಜನ್ನು ತಯಾರಿಸಲು ಪತ್ರ ಬರೆಯಲಾಗಿದೆ.

ಇ) ವಿಧಿವಿಧಾನಗಳನ್ನು (ಫಾರ್ಮಾಲಿಟೀಸ್) ಪಾಲಿಸಿ, ಹಣ ಲಭ್ಯತೆಯ ಮೇರೆಗೆ ಈ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು.